ಕರ್ನಾಟಕ ಗೃಹ ನಿರ್ಮಾಣ ಮಂಡಳಿಯವರಿಂದ ತ್ವರಿತವಾಗಿ ಸಾಲದ ಹಣ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉಪಾಧ್ಯಕ್ಷರು : ಶ್ರೀಯುತ ಯಡಿಯೂರಪ್ಪನವರು ಬಂದು ನಿಲುವಳಿ ಸೂಚನೆ ಕೊಟ್ಟಿದ್ದರು. ಈಗ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯಲ್ಲಿ ಮಂಡಿಸಲಿ ಅನಂತರ....

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ವಿ. ಮುನಿಯಪ್ಪ : (ರೇಷ್ಮೆ ಖಾತೆ ಸಚಿವರು) : ಮಾನ್ಯ ಉಪಾಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ, ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಕೊಡಗು ಜಿಲ್ಲೆಯ ಕೆರೆಗಳ ದುರಸ್ಥಿ ಕಾರ್ಯ

2980-ಶ್ರೀಮತಿ ಸುವಸಂತ (ವೀರಾಜಪೇಟೆ) :ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ದುರಸ್ತಿಯಾದ ಕೆರೆಗಳೆಷ್ಟು? ಹಾಗೂ ನಾಲೆಗಳೆಷ್ಟು? ತಾಲ್ಲೂಕುವಾರು ಮಾಹಿತಿಯನ್ನೊದಗಿಸುವುದು.

ಆ) ಮೇಲ್ಕಂಡ ಕಾರ್ಯಗಳಿಗಾಗಿ ಬಿಡುಗಡೆ ಮಾಡಿದ ಹಣವೆಷ್ಟು? ಹಾಗೂ ವಿರ್ಚಾದ ಹಣವೆಷ್ಟು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ) ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒಂದು ಕೆರೆ ಮಾತ್ರ ಇದ್ದು ಇದು ವೀರಾಜಪೇಟೆ ತಾಲ್ಲೂಕಿನ ವಡ್ಡರಮಡು ಹೊಳೆಗೆ ಅಡ್ಡಲಾಗಿ ನಿರ್ಮಾಣ ಹಂತದಲ್ಲಿರುವ ಕೆರೆ. ಆದ್ದರಿಂದ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವುದೇ ಕೆರೆಗಳು ಮತ್ತು ನಾಲೆಗಳ ದುರಸ್ತಿಯ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಕುಡಿಯುವ ನೀರಿನ ಅಭಾವ

3020-ಶ್ರೀಮತಿ ಸುಮಾ ವಸಂತ(ವೀರಾಜಪೇಟೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕೊಡಗು ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವದಿಂದಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಅವುಗಳಲ್ಲಿ ಎಷ್ಟು ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ. (ತಾಲ್ಲೂಕುವಾರು ಕೇಂದ್ರಗಳ ಮಾಹಿತಿಯನ್ನೊದಗಿಸುವುದು)

ಆ) ನೀರಿನ ಕೊರತೆ ನೀಗಿಸಲು ಸರ್ಕಾರವು ಕೈಗೊಂಡ ಕ್ರಮವೇನು?

ಇ) ನೀರು ಪೂರೈಕೆಗಾಗಿ ಈವರೆವಿಗೂ ವಿರ್ಚಾದ ಹಣವೆಷ್ಟು?

ಶ್ರೀ ಕೆ.ಜೆ. ಪಾಟೀಲ್ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)